ಮಧುಗಿರಿಯ ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ

**ಸಿ.ಸಿ. ಸಂಖ್ಯೆ: 143/2025**

ಪ್ರ.ವ.ಬೋ.ತಾಃ 24-07-2026

ಚಾಸಾಃ 1 ಪ್ರಾಸಾಃ 1

| | |
|---|---|
| ಸಾಕ್ಷಿಯ ಹೆಸರು | ಚೌಡಮ್ಮ |
| ತಂದೆ/ಗಂಡನ ಹೆಸರು | ರಮೇಶ್ |
| ವಯಸ್ಸು | 35 ವರ್ಷ |
| ವೃತ್ತಿ | ಕೂಲಿ ಕೆಲಸ |
| ವಾಸ | ಕಸಿನಾಯಕನಹಳ್ಳಿ, ಮಧುಗಿರಿ ತಾ. |

**ಸಾಕ್ಷಿಗೆ ಕನ್ನಡ ಭಾಷೆ ಬರದೇ ಇರುವ ಕಾರಣ ಶ್ರೀ ಎಂ.ಆರ್.ವಕೀಲರನ್ನು ಭಾಷಾಂತರಕರಾಗಿ ನೇಮಿಸಿ ಸಾಕ್ಷ್ಯವಿಚಾರಣೆ ಮಾಡಲಾಯಿತು.**

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ. ರವರಿಂದಃ-**

ನನಗೆ ಆರೋಪಿ ಗೊತ್ತು. ಚಾಸಾ.2 ನನ್ನ ಮಗ, ಚಾಸಾ.3 ನನ್ನ ಸಂಬಂಧಿಕರು. ಆರೋಪಿ ಎಂದೂ ಸಹ ಚಾಸಾ.2 ಮತ್ತು 3 ರವರನ್ನು ಅಡ್ಡಗಟ್ಟಿ ತಡೆದು ಅವಾಚ್ಯ ಶಬ್ದಗಳಿಂದ ಬೈದು, ಚಾಸಾ.2 ರವರಿಗೆ ಸ್ಟೀಲ್ ರಾಡಿನಿಂದ ಬಲಗೈ ಮತ್ತು ಎಡಗೈಗೆ ಹೊಡೆದು ನೋವುಂಟುಪಡಿಸಿರುವುದಿಲ್ಲ ಮತ್ತು ಚಾಸಾ.3 ರವರಿಗೆ ಅದೇ ಸ್ಟೀಲ್ ರಾಡಿನಿಂದ ತಲೆಗೆ, ಭುಜಕ್ಕೆ ಮತ್ತು ಎಡಗಾಲಿಗೆ ಹೊಡೆದು ರಕ್ತಗಾಯಪಡಿಸಿರುವುದಿಲ್ಲ ಮತ್ತು ನಮಗೆ ಜೀವ ಬೆದರಿಕೆ ಹಾಕಿರುವುದಿಲ್ಲ. ಈ ಸಂಬಂಧವಾಗಿ ಚಾಸಾ.2 ಮತ್ತು 3 ರವರು ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುವುದಿಲ್ಲ. ಈಗ ತೋರುತ್ತಿರುವ

ದೂರಿನಲ್ಲಿರುವ ಸಹಿ ನನ್ನದಾಗಿರುತ್ತದೆ. ಆ ದೂರನ್ನು ನಿಪಿ.1 ಎಂದು, ಸಾಕ್ಷಿಯ ಸಹಿಯನ್ನು ನಿಪಿ.1(ಎ) ಎಂದು ಗುರುತಿಸಲಾಯಿತು. ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನ್ಯಾಯಾಲಯದ ಮುಂದಿರುವ ಸ್ಟೀಲ್ ರಾಡನ್ನು ಯಾವ ಉದ್ದೇಶಕ್ಕಾಗಿ ಅಮಾನತ್ತುಪಡಿಸಿಕೊಂಡರು ಎಂಬುದು ನನಗೆ ಗೊತ್ತಿಲ್ಲ. ಈ ಸಂಬಂಧವಾಗಿ ನಾನು ಪೊಲೀಸರ ಮುಂದೆ ಯಾವುದೇ ಮರು ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸಸಅ ರವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ- ಮಾನ್ಯ ಸ.ಸ.ಅ. ರವರಿಂದಃ-**

ದಿಃ 15.12.2024 ರಂದು ಸಂಜೆ 4.30 ಗಂಟೆ ಸಮಯದಲ್ಲಿ ಚಾಸಾ.2 ರವರು ತನ್ನ ಬಾಬ್ತು ದ್ವಿಚಕ್ರ ವಾಹನದಲ್ಲಿ ಚಾಸಾ3 ರವರನ್ನು ಕೂರಿಸಿಕೊಂಡು ಮನೆಯ ಕಡೆಗೆ ಬರುತ್ತಿದ್ದಾಗ ಆರೋಪಿ ತಮ್ಮ ಹಳೆಯ ದ್ವೇಷದ ಹಿನ್ನೆಲೆಯಲ್ಲಿ ಚಾಸಾ.2 ಮತ್ತು 3 ರವರನ್ನು ಅಡ್ಡಗಟ್ಟಿ ತಡೆದು ಅವಾಚ್ಯ ಶಬ್ದಗಳಿಂದ ಬೈದು, ಸ್ಟೀಲ್ ರಾಡಿನಿಂದ ಚಾಸಾ.2 ರವರ ಬಲಗೈ, ಎಡಗೈಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿ, ಅದೇ ರಾಡಿನಿಂದ ಚಾಸಾ.3 ರವರ ತಲೆಗೆ, ಭುಜಕ್ಕೆ ಮತ್ತು ಎಡಗಾಲಿಗೆ ಹೊಡೆದು ರಕ್ತಗಾಯವನ್ನುಂಟು ಮಾಡಿ, ಚಾಸಾ.2 ಮತ್ತು 3 ರವರಿಗೆ ಜೀವ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಈ ಸಂಬಂಧವಾಗಿ ಚಾಸಾ.2 ಮತ್ತು 3 ರವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದರು ಎಂದರೆ ಸರಿಯಲ್ಲ. ಈ ಘಟನೆಯ ಸಂಬಂಧ ನಾನು ನಿಪಿ.1 ರಂತಹ ದೂರನ್ನು ನೀಡಿರುತ್ತೇನೆ

ಎಂದರೆ ಸರಿಯಲ್ಲ. ಆರೋಪಿ ನ್ಯಾಯಾಲಯದ ಮುಂದಿರುವ ಸ್ಟೀಲ್ ರಾಡಿನಿಂದ ಚಾಸಾ.2 ಮತ್ತು 3 ರವರಿಗೆ ಹಲ್ಲೆ ಮಾಡಿದರು ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಪೊಲೀಸರ ಮುಂದೆ ಮರು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಆ ಅಲ್ಲಗೆಳೆದ ಮರು ಹೇಳಿಕೆಯನ್ನು ನಿಪಿ.2 ಎಂದು ಗುರುತಿಸಲಾಯಿತು. ನಾನು, ಚಾಸಾ.2 ಮತ್ತು 3 ಹಾಗೂ ಆರೋಪಿ ನ್ಯಾಯಾಲಯದ ಹೊರಗೆ ರಾಜೀ ಆಗಿದ್ದೇವೆ ಎಂದರೆ ಸರಿ. ಆ ಕಾರಣಕ್ಕಾಗಿ ಆರೋಪಿ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ– ಆರೋಪಿತರ ಪರ ವಕೀಲರಿಂದಃ**– ಏನೂ ಇಲ್ಲ.

ಮರು ವಿಚಾರಣೆಃ– ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಅನುವಾದಕರ ಸಹಿ

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ